ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE : 5/10/20

ಎಸ್.ರಘು ನೇತೃತ್ವದ ಸಮಿತಿ ಶಿಫಾರಸಿನಂತೆ ಕ್ರಮ | ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ವಾರ್ಡ್‌ಗಳ ವಿಭಜನೆ

# ಬಿಬಿಎಂಪಿ ವಾರ್ಡ್ ಸಂಖ್ಯೆ ಹೆಚ್ಚಳಕ್ಕೆ ಅಧಿಸೂಚನೆ

5/10/'20

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಬಿಬಿಎಂಪಿಯ ವಾರ್ಡ್ ಸಂಖ್ಯೆಯನ್ನು ಈಗಿರುವ 198 ರಿಂದ 250ಕ್ಕೆ ಹೆಚ್ಚಳ ಮಾಡುವ ಬಗ್ಗೆ ರಾಜ್ಯ ಸರಕಾರ ಪತ್ರದ ಮೂಲಕ ಅಧಿಸೂಚನೆ ಹೊರಡಿಸಿದೆ. ಬಿಬಿಎಂಪಿ ವಾರ್ಡ್‌ಗಳ ಸಂಖ್ಯೆಯನ್ನು 225ಕ್ಕಿಂತ ಕಡಿಮೆ ಇಲ್ಲದಂತೆ 250ರವರೆಗೆ ಹೆಚ್ಚಳ ಮಾಡಲು ಅಧಿಸೂಚನೆ ಹೊರಡಿಸಿದ್ದು, ವಾರ್ಡ್‌ಗಳ ಸಂಖ್ಯೆ ಹೆಚ್ಚಳ ಸಂಬಂಧ ಕರ್ನಾಟಕ ನಗರ ಪಾಲಿಕೆಗಳ ಅಧಿನಿಯಮಕ್ಕೆ ರಾಜ್ಯಪಾಲರು ಒಪ್ಪಿಗೆ ನೀಡಿದ್ದಾರೆ.

ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ವಾರ್ಡ್‌ಗಳು ವಿಭಜನೆಯಾಗಲಿದ್ದು, ವಾರ್ಡ್ ಸಂಖ್ಯೆ ಹೆಚ್ಚಳ ಮಾಡುವಾಗ ಯಾವ ವಿಧಾನಸಭಾ ಕ್ಷೇತ್ರದ ವಾರ್ಡ್‌ಗಳನ್ನು ಅದೇ ಕ್ಷೇತ್ರದ ವ್ಯಾಪ್ತಿಯಲ್ಲಿ ಪುನರ್‌ವಿಂಗಡಣೆ ಮಾಡಿ ವಾರ್ಡ್ ಸಂಖ್ಯೆ ಹೆಚ್ಚಿಸಬೇಕು. ಯಾವುದೇ ಕಾರಣಕ್ಕೂ ಒಂದು ಕ್ಷೇತ್ರದ ವಾರ್ಡುಗಳನ್ನು ಬೇರೆ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಗೆ ಹಂಚಬಾರದು. ಪ್ರತಿ ವಾರ್ಡ್‌ಗಳ ಗಡಿ ನಿರ್ಧಾರ ವಿಧಾನವನ್ನು ಸರಕಾರಕ್ಕೆ ಶಿಫಾರಸು ಮಾಡಲು ಗಡಿ ನಿರ್ಧಾರ ಆಯೋಗ ರಚನೆ ಮಾಡಬೇಕು ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ. ಬೆಂಗಳೂರು ನಗರಕ್ಕೆ ಹೊಂದಿಕೊಂಡಿರುವ ಪ್ರದೇಶ



ಹೀಗಾಗಲೇ ಸಾಕಷ್ಟು ಅಭಿವೃದ್ಧಿಯಾಗಿದ್ದರೂ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿವೆ. ಈ ಪ್ರದೇಶಗಳು ಬಿಬಿಎಂಪಿಗೆ ಸೇರಲಿದ್ದು, ಬಿಬಿಎಂಪಿ ವ್ಯಾಪ್ತಿಯನ್ನು 800 ಚದರ ಕಿ.ಮೀ.ಯಿಂದ 1 ಸಾವಿರ ಚದರ ಕಿ.ಮೀ.ಗೆ ಏರಿಕೆಯಾಗಲಿದೆ.

ಕಳೆದ ವಿಧಾನಸಭೆ ಅಧಿವೇಶನದಲ್ಲಿ ಶಾಸಕ ಎಸ್.ರಘು ನೇತೃತ್ವದ ಜಂಟಿ ಪರಿಶೀಲನಾ ಸಮಿತಿ ಸಲ್ಲಿಸಿರುವ ವಿಶೇಷ ವರದಿಯಲ್ಲಿ ಬಿಬಿಎಂಪಿ ವಾರ್ಡ್‌ಗಳ ಸಂಖ್ಯೆಯನ್ನು 198ರಿಂದ 250ಕ್ಕೆ ಹೆಚ್ಚಳ ಮಾಡುವಂತೆ ಶಿಫಾರಸು ಮಾಡಲಾಗಿತ್ತು. ಅದಕ್ಕೆ ವಿಧಾನಸಭೆಯಲ್ಲಿ ಒಪ್ಪಿಗೆ ನೀಡಲಾಗಿತ್ತು. ಇದಕ್ಕೆ ಪೂರಕವಾಗಿ ಕರ್ನಾಟಕ ನಗರ ಪಾಲಿಕೆಗಳ ಅಧಿನಿಯಮ-1976ರ ನಿಯಮಾವಳಿಯಲ್ಲಿ ಸಣ್ಣ ಪ್ರಮಾಣದ ತಿದ್ದುಪಡಿ ಮಾಡಿ 200 ವಾರ್ಡ್‌ಗಳ ಹೆಸರಿನ ಬದಲಿಗೆ 250 ಎಂಬ ಪದ ಪ್ರಯೋಗಕ್ಕೆ ಒಪ್ಪಿಗೆ ಪಡೆಯಲಾಗಿತ್ತು.

2020ನೇ ಸಾಲಿನ ಬಿಬಿಎಂಪಿ ವಿಧೇಯಕವನ್ನು ಪರಿಶೀಲಿಸಲು ಸಮಿತಿಯು ತನ್ನ ಅಂತಿಮ ವರದಿ ಸಲ್ಲಿಸಲು ನವೆಂಬರ್ ಅಂತ್ಯದವರೆಗೆ ಗಡುವು ಪಡೆದಿದ್ದು, ಅಲ್ಲಿಯವರೆಗೆ ವಿಧೇಯಕಕ್ಕೆ ಒಪ್ಪಿಗೆ ದೊರೆಯುವುದು ಅನುಮಾನ ಎಂಬಂತಾಗಿದೆ. ಇದರ ನಡುವೆ ಸೆ.15 ರಂದು ಸಮಿತಿಯು ಒಂದು ಪುಟದ ವಿಶೇಷ ವರದಿ ಸಲ್ಲಿಸಿ ಬಿಬಿಎಂಪಿಯ ಚುನಾಯಿತ ಸದಸ್ಯರ ಅವಧಿ ಮುಗಿದಿದ್ದು, ಮಹಾನಗರ ಪಾಲಿಕೆಗೆ ಚುನಾವಣೆ ನಡೆಸಬೇಕಾಗಿರುತ್ತದೆ. ಪ್ರಸ್ತುತ ವಿದ್ಯಮಾನಗಳು ಬೆಂಗಳೂರು ಮಹಾನಗರದಲ್ಲಿ ಹೆಚ್ಚಳವಾದ ಜನಸಂಖ್ಯೆ ಹಾಗೂ ವಿಸ್ತೀರ್ಣದ ಆಧಾರದ ಮೇಲೆ 1976ನೇ ಸಾಲಿನ ಕರ್ನಾಟಕ ನಗರ ಪಾಲಿಕೆಗಳ ಅಧಿನಿಯಮ ಪ್ರಕರಣ 7ಕ್ಕೆ ತಿದ್ದುಪಡಿ ತಂದು ವಾರ್ಡ್ ಹೆಚ್ಚಳಕ್ಕೆ ಅವಕಾಶ ಮಾಡಿಕೊಡಬೇಕು. ಇದಕ್ಕಾಗಿ 1976ನೇ ಸಾಲಿನ ಕರ್ನಾಟಕ ನಗರ ಪಾಲಿಕೆಗಳ ಅಧಿನಿಯಮ 7(1)ನೇ ಉಪ ಪ್ರಕರಣದ (ಎ) ಖಂಡರದಲ್ಲಿ 200 ಬದಲಿಗೆ 250 ಎಂಬ ಪದ ಪ್ರಯೋಗಿಸಬೇಕು ಎಂದು ವರದಿ ನೀಡಿದ್ದರು.